ಕರ್ನಾಟಕ ಸರ್ಕಾರ
ಜಂಟಿ ನಿರ್ದೇಶಕರ ಕಾರ್ಯಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು-02
ದೂ.ಸಂ:22242943, ಫ್ಯಾಕ್ಸ್ :22271998,
ಇ-ಮೇಲ್: jd_mms@yahoo.co.in

ಸಂಖ್ಯೆ:ಎ೦6/ಅದಾ/ಕೇಂದ್ರ.ತ.ಪ./5/12-13 ದಿನಾಂಕ:01-7-2013

## ಸುತ್ತೋಲೆ

**ವಿಷಯ :** ಮಧ್ಯಾಹ್ನ ಉಪಹಾರ ಯೋಜನೆಯಡಿ ಮಧ್ಯಾಹ್ನದ ಬಿಸಿಯೂಟವನ್ನು ಎನ್.ಜಿ.ಒ.ಗಳ ಮೂಲಕ ಪಡೆಯುತ್ತಿರುವ ಶಾಲೆಗಳಲ್ಲಿ ಸಹಾಯಕರನ್ನು ಗೌರವಧನದ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

**ಉಲ್ಲೇಖ :** ಸರ್ಕಾರದ ಆದೇಶ ಸಂಖ್ಯೆ :ಇಡಿ 46 ಎಂ.ಎಂ.ಎಸ್. 2012, ದಿನಾಂಕ :3-11-2012.
2. ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ :28-11-2011.

* * * * *

ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ ಮಧ್ಯಾಹ್ನದ ಬಿಸಿಯೂಟ ಯೋಜನೆಯಡಿ ಮಕ್ಕಳಿಗೆ ನೀಡುವ ಬಿಸಿಯೂಟವನ್ನು ಎನ್.ಜಿ.ಒ.ಗಳ ಮೂಲಕ ಸರಬರಾಜು ಪಡೆಯುತ್ತಿರುವ ಶಾಲೆಗಳಿಗೆ ಸಹಾಯಕರನ್ನು ನೇಮಕ ಮಾಡುವ ಬಗ್ಗೆ ಉಲ್ಲೇಖ (2)ರ ಜ್ಞಾಪನದಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ.

ಉಲ್ಲೇಖ (2)ರ ಜ್ಞಾಪನದಲ್ಲಿ ತಿಳಿಸಿರುವಂತೆ ಕೆಲವು ಸ್ವಯಂ ಸೇವಾ ಸಂಸ್ಥೆಗಳು ಸಹಾಯಕರನ್ನು ನೇಮಕ ಮಾಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಾರೆ. ಇದರಿಂದ ಮಕ್ಕಳಿಗೆ ಬಿಸಿಯೂಟ ಬಡಿಸುವ ಕಾರ್ಯವನ್ನು ಶಾಲಾ ಶಿಕ್ಷಕರುಗಳೇ ನಿರ್ವಹಿಸುತ್ತಿರುತ್ತಾರೆ. ಇದರಿಂದ ಶಿಕ್ಷಕರುಗಳಿಗೆ ಹೆಚ್ಚಿನ ಹೊರೆ ಬೀಳುತ್ತಿರುವುದನ್ನು ಗಮನಿಸಿದೆ.

ಎನ್.ಜಿ.ಒ.ಗಳು ಶಾಲೆಗಳಿಗೆ ಸಹಾಯಕರನ್ನು ನೀಡುವಲ್ಲಿ ವಿಳಂಬ ಮಾಡುತ್ತಿದ್ದಲ್ಲಿ ಆಯಾ ಶಾಲಾ ಮುಖ್ಯ ಶಿಕ್ಷಕರು ಮತ್ತು ಎಸ್.ಡಿ.ಎಂ.ಸಿ.ರವರು ಅಕ್ಷರ ದಾಸೋಹ ಮಾರ್ಗಸೂಚಿ ಪುಸ್ತಕದಲ್ಲಿ ತಿಳಿಸಿರುವಂತೆ ಮೀಸಲಾತಿ/ವಯೋಮಿತಿ/ವಿದ್ಯಾರ್ಹತೆ ಅನುಸರಿಸಿ ಸೂಕ್ತ ವ್ಯಕ್ತಿಗಳನ್ನು ನಿಯಮಾನುಸಾರ ಎಸ್.ಡಿ.ಎಂ.ಸಿ./ಆಡಳಿತ ಮಂಡಳಿ ಸಭೆಯಲ್ಲಿ ಆಯ್ಕೆ ಮಾಡಿ ನಡಾವಳಿಯೊಂದಿಗೆ ಆಯಾ ಸ್ವಯಂ ಸೇವಾ ಸಂಸ್ಥೆಗೆ ಪಟ್ಟಿ ಸಲ್ಲಿಸುವಂತೆ ಸೂಚಿಸಿದೆ. ಈ ಬಗ್ಗೆ ಕೂಡಲೇ ಕಾರ್ಯಕ್ರಮದ ಅನುಷ್ಠಾನಕ್ಕೆ ತೊಂದರೆಯಾಗದ ರೀತಿಯಲ್ಲಿ ಅಗತ್ಯ ಕ್ರಮವಹಿಸಲು ತಿಳಿಸಿದೆ.

**"ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

(ಎಸ್. ಜಯಕುಮಾರ)
ಜಂಟಿ ನಿರ್ದೇಶಕರು,
ಮಧ್ಯಾಹ್ನ ಉಪಹಾರ ಯೋಜನೆ.

**ಗೆ,**
ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್.

D:\AD\M6\2013\M6.doc

Mid Day Meal Scheme